MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 308 | ಗುರುವಾರ : 25-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 308 | THURSDAY : 25-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಸರ್ಕಾರದ ಹಣ ದುರ್ಬಳಕೆಗೆ ಮುಂದಾದ ಶಾಸಕ ಮಾನಪ್ಪ ವಜ್ಜಲ್ : ಡಿ.ಎಸ್ ಹೂಲಗೇರಿ ಆರೋಪ

ಯುವ ಮಾರ್ಗ ಸುದ್ದಿ




**ಲಿಂಗಸುಗೂರು,ಸೆ.24–** ಕ್ಷೇತ್ರದ ಅಭಿವೃದ್ದಿಗೆ ಸರ್ಕಾರ ಸಮರ್ಪಕ ಅನುದಾನ ನೀಡುತ್ತದೆ ಶಾಸಕ ಮಾನಪ್ಪ ವಜ್ಜಲ್ ಅನುದಾನಕ್ಕೆ ಪ್ರಯತ್ನಿದೇ ಸರ್ಕಾರದ ಮೇಲೆ ಗೂಬೆ ಕೂರಿಸುತ್ತಿದ್ದಾರೆ. ವಜ್ಜಲ್‌ರದು ಕುಣಿಯಲು ಬಾರದೇ ನೆಲ ಡೊಂಕು ಎನ್ನುವ ಜಾಯಮಾನದವರು ಎಂದು ಮಾಜಿ ಶಾಸಕ ಡಿ.ಎಸ್ ಹೂಲಗೇರಿ ಲೇವಡಿ ಮಾಡಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಮಾತನಾಡಿದ ಅವರು, ಸರ್ಕಾರ ಅತೀವೃಷ್ಠಿ, ಕೆಕೆಆರ್‌ಡಿಬಿ ಹಾಗೂ ಶಾಸಕರ ಅನುದಾನ 90 ಕೋಟಿ ಹಣ ನೀಡುತ್ತದೆ. ಕ್ಷೇತ್ರದ ಅಭಿವೃದ್ದಿಗೆ ಅನುದಾನ ಬಳಸಿಕೊಳ್ಳದೇ ಕೇವಲ ಸಿಸಿ ರಸ್ತೆ ಹಾಗೂ ಸಿಡಿಗಳ ನಿರ್ಮಾಣ ಹಣ ಬಳಕೆ ಮಾಡುತ್ತಿದ್ದಾರೆ. ಕಳಪೆ ಕಾಮಗಾರಿ ಕೈಗೊಂಡು ಹಣ ಎತ್ತುವಳಿ ಮಾಡುತ್ತಿದ್ದಾರೆ. ಕೆಆರ್‌ಐಡಿಎಲ್ ಕಾಮಗಾರಿಗಳನ್ನು ನೀಡುವ ಬದಲು ಟೆಂಡರ್ ಕರೆದು ಕಾಮಗಾರಿ ಕೈಗೊಳ್ಳಬೇಕಿತ್ತು. ಕಾಮಗಾರಿಗಳನ್ನು ಕಳಪೆಯಾಗಿ ನಿರ್ಮಿಸಲಾಗುತ್ತಿದೆ ಎಂದು ಆರೋಪಿಸಿದರು.

ಲಿಂಗಸುಗೂರಿಗೆ 200 ಹಾಸಿಗಳ ಜಿಲ್ಲಾಸ್ಪತ್ರೆ ಒದಗಿಸಲು 2020ರಲ್ಲಿ ಮನವಿ ಮಾಡಿದಾಗ 2022ರಲ್ಲಿ ಸರ್ಕಾರ ಬಜೆಟ್‌ನಲ್ಲಿ ಜಿಲ್ಲಾಸ್ಪತ್ರೆ ಘೋಷಣೆ ಮಾಡಿ ತು. ನಂತರ ಅದನ್ನು ಬೇರೆಡೆ ವರ್ಗಾ ಯಿಸಿದರು. ಆದರೆ ಲಿಂಗಸುಗೂರಿಗೆ 200 ಹಾಸಿಗೆ ಜಿಲ್ಲಾಸ್ಪತ್ರೆ ಮಂಜೂರಿ ಮಾಡಿಸುವೇ ಅಲ್ಲದೇ 100 ಹಾಸಿಗೆಯ ತಾಯಿ ಮಕ್ಕಳ ಆಸ್ಪತ್ರೆ ಸಂಬಂಧಿಸಿದ ಸಚಿವರೊಂದಿಗೆ ಮಾತನಾಡಿ ಉದ್ಘಾಟನೆ ಮಾಡಲಾಗುವುದೆಂದು ತಿಳಿಸಿದರು.(2ನೇಪುಟಕ್ಕೆ)

## ಮಹಾನಗರ ಪಾಲಿಕೆಯಿಂದ ಪೂರ್ವಭಾವಿ ಸಭೆ : ದಸರಾ ಆಚರಣೆಗೆ ನಿರ್ಣಯ

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.24–** ನಗರದ ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಬುಧವಾರ ದಸರಾ ಹಬ್ಬದ ಪೂರ್ವಭಾವಿ ಸಿದ್ದತಾ ಸಭೆ ನಡೆಯಿತು.

ಮಹಾನಗರ ಪಾಲಿಕೆಯ ಮಹಾಪೌರರಾದ ನರಸಮ್ಮ ನರಸಿಂಹಲು ಮಾಡಿಗಿರಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ದಸರಾ ಹಬ್ಬದ ರೂಪುರೇಷಗಳ ಬಗ್ಗೆ ಚರ್ಚಿಸಲಾಯಿತು.

ಸಭೆಯಲ್ಲಿ, ಪಾಲಿಕೆಯ ಹಿರಿಯ ಸದಸ್ಯೆ ಜಯಣ್ಣ ಹಾಗೂ ಈ.ಶಶಿರಾಜ ಅವರು ಮಾತನಾಡಿ, ಸ್ಥಳೀಯ, ಜಿಲ್ಲಾ, ರಾಜ್ಯ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಅಕರ್ಷಣೀಯ ಕಲಾ ತಂಡಗಳು ದಸರಾ ಹಬ್ಬದಲ್ಲಿ ಭಾಗವಹಿಸುವಂತೆ ಕ್ರಮವಹಿಸಬೇಕು ಎಂದು ಸಲಹೆ ನೀಡಿದರು.

ಮೆಕ್ಕಾ ದರವಾಜದಲ್ಲಿ ಕವಿಗೋಷ್ಠಿಯ




ಅಂಗವಾಗಿ ಹೆಸರಾಂತ ಕವಿಗಳನ್ನು ಸಾಹಿತಿಗಳನ್ನು ಕರೆಯಿಸಿ ವಿಜೃಂಭಣೆಯಿಂದ ಜರುಗಿಸಲು ಒಮ್ಮತದ ನಿರ್ಣಯ ಕೈಗೊಳ್ಳಲಾಯಿತು.

ಇದೇ ಸಂದರ್ಭದಲ್ಲಿ ಪಾಲಿಕೆಯ ಉಪ ಮಹಾಪೌರರಾದ ಸಾಜೀದ್ ಸಮೀರ, ಸದಸ್ಯರಾದ ದರೂರು ಬಸವರಾಜ ಪಾಟೀಲ, ವಿ.ನಾಗರಾಜ ನಾಮ ನಿರ್ದೇಶಿತ ಸದಸ್ಯರಾದ ಮುನಿಯಪ್ಪ, ಮಹ್ಮದ್ ಫಿರೋಜ್, ವೆಂಕಟೇಶ, ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ನರಸಿಂಹಲು ಮಾಡಿಗಿರಿ, ಮಹಾನಗರ ಪಾಲಿಕೆಯ ಆಡಳಿತ ಉಪ ಆಯುಕ್ತರಾದ ಸಂತೋಷ ರಾಣಿ, ವಲಯ ಆಯುಕ್ತರಾದ ಬಸವರಾಜ ಹೆಬ್ಬಾಳ, ಮಲ್ಲಿಕಾರ್ಜುನ ಎಂ.ಬಿ., 2ನೇ ವಲಯ ಆಯುಕ್ತರಾದ ಜಯಪಾಲ ರೆಡ್ಡಿ, ಸಮುದಾಯ ಸಂಘಟನಾಧಿಕಾರಿ ಕೃಷ್ಣ ಕಟ್ಟಿಮನಿ, ಕಂದಾಯ ಅಧಿಕಾರಿಗಳಾದ ನರಸಿಂಹರೆಡ್ಡಿ, ಕಲಾವಿದರಾದ ವಿ.ಎಚ್. ಮಾಸ್ಟರ್ ಇದ್ದರು.

## ಭೈರಪ್ಪ ನಿಧನಕ್ಕೆ ಮೋದಿ, ಸಿಎಂ ಸೇರಿ ಗಣ್ಯರ ಕಂಬನಿ



**ನವದೆಹಲಿ, ಸೆ.24–** ಖ್ಯಾತ ಕಾದಂಬರಿಕಾರ ಎಸ್.ಎಲ್. ಭೈರಪ್ಪ ಅವರ ನಿಧನದೊಂದಿಗೆ, ನಮ್ಮ ಆತ್ಮಸಾಕ್ಷಿಯನ್ನು ಕದಲಿಸಿದ ಮತ್ತು ಭಾರತದ ಆತ್ಮವನ್ನು ಮುಟ್ಟಿದ ಒಬ್ಬ ಧೀಮಂತ ವ್ಯಕ್ತಿತ್ವವನ್ನು ನಾವು ಕಳೆದುಕೊಂಡಿದ್ದೇವೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಸಂತಾಪ ವ್ಯಕ್ತಪಡಿ ಸಿದ್ದಾರೆ.

ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ನಿರ್ಭೀತ ಮತ್ತು ಕಾಲಾತೀತ ಚಿಂತಕರಾಗಿದ್ದ ಭೈರಪ್ಪ, ತಮ್ಮ ಚಿಂತನಶೀಲ ಕೃತಿಗಳಿಂದ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ. ಅವರ ಬರಹಗಳು ಪೀಳಿಗೆಗಳನ್ನು ಚಿಂತಿಸಲು, ಪ್ರಶ್ನಿಸಲು ಮತ್ತು ಸಮಾಜದೊಂದಿಗೆ ಹೆಚ್ಚು ಆಳವಾಗಿ ತೊಡಗಿಸಿಕೊಳ್ಳಲು ಪ್ರೇರೇಪಿಸಿದವು ಎಂದು ಗುಣಗಾನ ಮಾಡಿದ್ದಾರೆ.

ನಮ್ಮ ಇತಿಹಾಸ ಮತ್ತು ಸಂಸ್ಕೃತಿಯ ಬಗ್ಗೆ ಅವರ ಅಚಲವಾದ ಉತ್ಸಾಹವು ಮುಂದಿನ ದಿನಗಳಲ್ಲೂ ಜನರನ್ನು ಪ್ರೇರೇಪಿಸುತ್ತಲೇ ಇರುತ್ತದೆ. ಈ ದುಃಖದ ಸಮಯದಲ್ಲಿ ಅವರ ಕುಟುಂಬ ಮತ್ತು ಅಭಿಮಾನಿಗಳಿಗೆ ನನ್ನ ಸಂತಾಪಗಳು. ಓಂ ಶಾಂತಿ." ಎಂದು ಕನ್ನಡದಲ್ಲಿ ಸಂತಾಪ ಸೂಚಿಸಿದ್ದಾರೆ.

**ಸಿಎಂ ಸಂತಾಪ** ;ಕನ್ನಡ ಸಾರಸ್ವತ ಲೋಕದ ಹಿರಿಯ ಬರಹಗಾರರಾದ ಎಸ್.ಎಲ್.ಭೈರಪ್ಪನವರ ನಿಧನವಾರ್ತೆ ನೋವು ತಂದಿದೆ. ಭೈರಪ್ಪನವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಾರ್ಥಿಸಿದ್ದಾರೆತಮ್ಮ ಆಪ್ತವೆನಿಸುವ ಬರಹ ಶೈಲಿಯಿಂದಾಗಿ ಅಪಾರ ಓದುಗರನ್ನು ಹೊಂದಿದ್ದ(2ನೇಪುಟಕ್ಕೆ)

## ಸೆ.27ರಂದು ಖಾಸಗಿ ಕಾಲೇಜುಗಳಿಂದ ಶಿಕ್ಷಕರ ದಿನಾಚರಣೆ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭ




ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.24–**ಖಾಸಗಿ ಕಾಲೇಜುಗಳ ಆಡಳಿತ ಮಂಡಳಿಗಳ ಒಕ್ಕೂಟ ಮಾನ್ವಿ ಹಾಗೂ ಖಾಸಗಿ ಕಾಲೇಜುಗಳ ಉಪನ್ಯಾಸಕರ ಸಂಘ ಮಾನ್ವಿ ಇವರ ಸಂಯುಕ್ತ ಆಶ್ರಯದಲ್ಲಿ ಸೆಪ್ಟೆಂಬರ್ 27ರಂದು ನಗರದ ಗಾಂಧಿ ಕಾಲೇಜು ಸಭಾಂಗಣದಲ್ಲಿ ಶಿಕ್ಷಕರ ದಿನಾಚರಣೆ,ಉತ್ತಮ ಉಪನ್ಯಾಸಕ ಪ್ರಶಸ್ತಿ ಮತ್ತು ಅಕ್ಷರ ದಾಸೋಹಿ ಪ್ರಶಸ್ತಿ ಪ್ರಧಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಖಾಸಗಿ ಕಾಲೇಜುಗಳ ಆಡಳಿತ ಮಂಡಳಿಗಳ ಒಕ್ಕೂಟದ ತಾಲೂಕ ಅಧ್ಯಕ್ಷ ಪಿ.ತಿಪ್ಪಣ್ಣ ಬಾಗಲವಾಡ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶ ಮಾತನಾಡಿದ ಅವರು, ಮಾನ್ವಿ ಹಾಗೂ ಸಿರವಾರ ತಾಲೂಕಿನ ಖಾಸಗಿ ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವವರನ್ನು ಉಪನ್ಯಾಸಕರನ್ನು ಗುರುತಿಸಿ ಪ್ರಶಸ್ತಿ ಪ್ರಧಾನ ಮಾಡಲಾಗುತ್ತಿದೆ. ಕಾರ್ಯಕ್ರಮದ ಮೂಲಕ ನಮ್ಮ ಖಾಸಗಿ ಶಿಕ್ಷಣ ಸಂಸ್ಥೆಗಳ ಸಮಸ್ಯೆಗಳ ಕುರಿತು ಸರ್ಕಾರದ ಗಮನಕ್ಕೆ ತರಲು ಪ್ರಯತ್ನಿಸಲಾಗುವುದು. ಕಾರ್ಯಕ್ರಮದಲ್ಲಿ ಸಚಿವ ಎನ್ ಎಸ್ ಬೋಸರಾಜು, ಶಾಸಕ ಹಂಪಯ್ಯ ನಾಯಕ ಹಾಗೂ ಮಾಜಿ ಶಾಸಕರಗಳು, ಶಿಕ್ಷಣ ಪ್ರೇಮಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಖಾಸಗಿ ಕಾಲೇಜುಗಳ ಉಪನ್ಯಾಸಕ ಸಂಘದ ಅಧ್ಯಕ್ಷ ಆಂಜನೇಯ ನಸಲಾಪೂರ ಮಾತನಾಡಿ, ಅಕ್ಷರ ದಾಸೋಹಿ ಪ್ರಶಸ್ತಿಗೆ ನಗರದ ಲೋಯೋಲಾ ಕಾಲೇಜು ಮತ್ತು ಶಾರದಾ ಕಾಲೇಜುಗಳಿ ಂದ ತಲಾ ಇಬ್ಬರನ್ನು ಆಯ್ಕೆ ಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಕೆ.ಈ.ನರಸಿಂಹ, ಮೌನೇಶಗೌಡ.ಹೆಚ್, ಈರಣ್ಣ ಮರ್ಲಟ್ಟಿ, ಶರಣಬಸವ ಸೀಕಲ್, ಮಹಾಂತೇಶ ಓಲೇಕಾರ್, ವೀರಭದ್ರಯ್ಯ ಸ್ವಾಮಿ, ಮಹೇಬೂಬ್ ಮದ್ಲಾಪೂರ, ಕೃಷ್ಣಾವಧೂತ, ಹನುಮಂತ ಯಡಿವಾಳ, ಹನುಮಂತರಾಯಗಲಗ ಇದ್ದರು

## ಶಾಸಕ ಬಸನಗೌಡ ದದ್ದಲ್ ರಿಂದ ಸಮುದಾಯ ಭವನ ಉದ್ಘಾಟನೆ



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.24–** ಮಹರ್ಷಿ ವಾಲ್ಮೀಕಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಸೆ.24ರಂದು ಮಮದಾಪೂರ ಗ್ರಾಮದಲ್ಲಿ ಸಮುದಾಯ ಭವನ ಕಾಮಗಾರಿಗೆ ಚಾಲನೆ ನೀಡಿದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮ್ಯಾಕ್ರೋ ಯೋಜನೆಯಡಿ ಸಮುದಾಯ ಭವನ ನಿರ್ಮಾಣಕ್ಕೆ ಶಾಸಕರು ಭೂಮಿಪೂಜೆಯನ್ನು ನೆರವೇರಿಸಿದರು.

ವಿಶೇಷ ಅನುದಾನದಡಿಯಲ್ಲಿ ಶ್ರೀಶಾಂಭವಿ ದೇವಿಯ ಗುಡಿ ಹತ್ತಿರ ಶೆಡ್ ನಿರ್ಮಾಣಕ್ಕೆ ಸಹ ಶಾಸಕರು ಚಾಲನೆ ನೀಡಿದರು.

**ದೇವರ ದರ್ಶನ ಪಡೆದರು:** ಸೆ.24ರಂದು ಗ್ರಾಮೀಣ ಪ್ರವಾಸ ಕೈಗೊಂಡ ವೇಳೆಯಲ್ಲಿ ಶಾಸಕರು, ಸುಕ್ಷೇತ್ರ ಗಧಾರ ಶ್ರೀ ಮಾರಿಕಾಂಬಾ ದೇವಿಯ ಮತ್ತು ಶ್ರೀ ಶಾಂಭವಿದೇವಿಯ ದರ್ಶನಾಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಗಿಲ್ಲೇಸೂಗುರ ಬ್ಲಾಕ್ ಅಧ್ಯಕ್ಷರು, ಊರಿನ ಹಿರಿಯ ಮುಖಂಡರು, ಸುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ನಾಮನಿರ್ದೇಶಿತ ಸದಸ್ಯರು, ತಾಲೂಕು ಮಟ್ಟದ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು, ಕಾರ್ಯಕರ್ತರು ಗ್ರಾಮಸ್ಥರು ಉಪಸ್ಥಿತರಿದ್ದರು.

## ಸವಲತ್ತಿನ ಸದ್ಬಳಕೆ ಜತೆಗೆ ಕಾನೂನಿನ ಅರಿವು ಪಡೆಯಲು ಕಾರ್ಮಿಕರಿಗೆ ಸಲಹೆ

ಯುವ ಮಾರ್ಗ ಸುದ್ದಿ




**ರಾಯಚೂರು,ಸೆ.24–**ಕಾರ್ಮಿಕರು ಇಲಾಖೆಯಿಂದ ದೊರೆಯುವ ಸವಲತ್ತಿನ ಸದ್ಬಳಕೆ ಜತೆಗೆ ಕಾನೂನಿನ ಅರಿವು ಪಡೆಯಬೇಕು ಎಂದು ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಹೇಳಿದರು.

ಬುಧವಾರ ನಗರದ ಕರ್ನಾಟಕ ರಾಜ್ಯ ನೌಕರರ ಜಿಲ್ಲಾ ಸಂಘದ ಭವನದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಕಾರ್ಮಿಕ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ವಿವಿಧ ಯೋಜನೆ ಹಾಗೂ ಸೌಲಭ್ಯಗಳ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ ಹಾಗೂ ಗುರುತಿನ ಪತ್ರ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಾರ್ಮಿಕರು ಸಂಘಟಿತರಾಗಿ ತಮಗೆ ಸಿಗುವ ಸವಲತ್ತುಗಳನ್ನು ಪಡೆದು ಕೊಳ್ಳಬೇಕು. ಕನಿಷ್ಟ ವೇತನ ಕಾಯಿದೆ ಹಾಗೂ ಇನ್ನಿತರ ಕಾಯಿದೆಗಳಿಂದ ದೊರೆಯುವ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ದೇಶದಲ್ಲಿ ಹಲವಾರು ಕಾನೂನುಗಳಿದ್ದು, ಕಾರ್ಮಿಕರು ತಮಗೆ ಬೇಕಾದ ಕಾನೂನುಗಳನ್ನು ಅರಿಯಬೇಕು. ಜಿಲ್ಲಾ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ ಉಚಿತ ಕಾನೂನು ನೆರವು ನೀಡಲಾಗುತ್ತಿದ್ದು, ಕಾರ್ಮಿಕರು ಅದರ ಸದುಪಯೋಗ ಪಡೆಯಬೇಕು. ಯಾವುದೇ ವೆಚ್ಚವಿಲ್ಲದೆ ಉಚಿತವಾಗಿ ವಕೀಲರನ್ನು ನೀಡಲಾಗುತ್ತದೆ ಎಂದರು.

ಯಾವುದೇ ಕಾರ್ಖಾನೆ ಅಭಿವೃದ್ಧಿಯಾಗಬೇಕಾದಲ್ಲಿ ಕಾರ್ಮಿಕರ ಶ್ರಮವು ಅತ್ಯಗತ್ಯವಾರುತ್ತದೆ. ಇದನ್ನು ಮಾಲೀಕರು ಅರಿತು ಕಾರ್ಮಿಕರಿಗೆ ಸರಿಯಾದ ಸೌಕರ್ಯ ನೀಡಬೇಕು. ಅವರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ತಿಳಿಸಿದರು.

ಈ ವೇಳೆ ಜಿಲ್ಲಾ ಕಾರ್ಮಿಕ(2ನೇಪುಟಕ್ಕೆ)

## ರೈತರು ಹೊಸ ಬೆಳೆಗೆ ಬದಲಾಗಲಿ: ಶಾಸಕರಾದ ಹಂಪನಗೌಡ ಬಾದರ್ಲಿ ಸಲಹೆ

ಯುವ ಮಾರ್ಗ ಸುದ್ದಿ



**ರಾಯಚೂರು,ಸೆ.24–**ಸಿಂಧನೂರು ಸೇರಿದಂತೆ ಈ ಭಾಗದಲ್ಲಿ ಮೊದಲು ಎಲ್ಲೆಡೆ ಹೈಬ್ರಿಡ್ ಹತ್ತಿ ಬೆಳೆ ತೆಗೆಯುತ್ತಿದ್ದರು.1985 ರಿಂದ ಹತ್ತಿ ಬೆಳೆಯ ಜಾಗದಲ್ಲಿ ಭತ್ತದ ಬೆಳೆ ಬಂದಿತು. ಕಾಲಕ್ಕೆ ತಕ್ಕಂತೆ ನಮ್ಮ ಭಾಗದ ರೈತರು ಹೊಸ ಬೆಳೆಗೆ ಬದಲಾಗಬೇಕು ಎಂದು ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ವಿಧಾನ ಸಭಾ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಸಲಹೆ ಮಾಡಿದರು.

ಸೋಮಲಾಪುರದ ಅಂಬಾ ದೇವಸ್ಥಾನದ ಬಳಿ ಮಂಗಳವಾರ ಆರಂಭಗೊಂಡ ಗ್ರಾಮೀಣ ದಸರಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಮಗು ವಯಸ್ಸಾಗುತ್ತಾ ಬಂದಿತು, ತುಂಗಭದ್ರಾ ಡ್ಯಾಂಗು ವಯಸ್ಸಾಯಿತು ಎಂದು ಹೇಳುತ್ತ ಸಭಾಂಗಣದಲ್ಲಿ ನಗೆ ಉಕ್ಕಿಸಿದ ಶಾಸಕರು, ಕಾಲ ಬದಲಾಗುತ್ತಿದೆ. ಅಂತೆಯೇ ನಾವು ಬದಲಾಗಬೇಕು. ಹೊಸತನಕ್ಕೆ ನಾವೆಲ್ಲ ಸಿದ್ಧರಾಗಲೇಬೇಕು ಎಂದು ಸಲಹೆ ಮಾಡಿದರು.

ನಮ್ಮ ಸಾಮಾಜಿಕ ಪರಿಕಲ್ಪನೆ ಬದಲಾಗಲೇಬೇಕು. ಎಲ್ಲರೂ ಶಿಕ್ಷಣ ಪಡೆಯಬೇಕು. ರೈತರು ಕೃಷಿಯಲ್ಲಿ ತಂತ್ರಜ್ಞಾನ ಬಳಸಬೇಕು. ಗ್ರಾಮೀಣ ಕಲೆ ಉಳಿಯಬೇಕು. ಆರೋಗ್ಯ ಕಾಯ್ದುಕೊಳ್ಳಬೇಕು. ಗಿಡ ಮರ ಹೆಚ್ಚು ಹೆಚ್ಚು ಬೆಳೆಸಬೇಕು.

ಈ ನಿಟ್ಟಿನಲ್ಲಿ ಯೋಚಿಸಿಯೇ ನಾವು ಗ್ರಾಮೀಣ ದಸರಾ, ರೈತ ದಸರಾ, ಆರೋಗ್ಯ ದಸರಾ, ಶಿಕ್ಷಣ ದಸರಾ, ಹಸಿರು ದಸರಾ ಎಂದು ವಿನೂತನ ರೀತಿಯಲ್ಲಿ ದಸರಾ ಉತ್ಸವ ಆಯೋಜನೆ ಮಾಡಿದ್ದೇವೆ ಎಂದು ತಿಳಿಸಿದರು.

ನಮ್ಮ ಭಾಗದ ರೈತರು ಪ್ರಸಿದ್ಧ ಸೋನಾ ಮಸೂರಿ ಬೆಳೆ ತೆಗೆಯುತ್ತ ಕೃಷಿ ವಿಜ್ಞಾನಿಗಳಿಗಿಂತಲೂ ಮುಂದಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದ ಶಾಸಕರು, ಎಲ್ಲ ಗ್ರಾಮ ಪಂಚಾಯತಗಳಲ್ಲಿ ಆಯೋಜನೆ ಮಾಡಿದ, ಹೊಸ ಸಾಮಾಜಿಕ ಸಂದೇಶದ ಕಿರು ನಾಟಕಗಳನ್ನು ಸಾರ್ವಜನಿಕರು ವೀಕ್ಷಣೆ ಮಾಡಬೇಕು. ಆ ನಾಟಕಗಳ(2ನೇಪುಟಕ್ಕೆ)

## ಮೊದಲನೇಯ ಪುಟದಿಂದ

# ಸರ್ಕಾರದ ಹಣ ದುರ್ಬಳಕೆಗೆ ಮುಂದಾದ ಶಾಸಕ ಮಾನಪ್ಪ ವಜ್ಜಲ್ : ಡಿ,ಎಸ್ ಹೂಲಗೇರಿ ಆರೋಪ

ನಾನು 5 ವರ್ಷ ಶಾಸಕನಾಗಿದ್ದೇನೆ ಮಾನಪ್ಪ ವಜ್ಜಲ್‌ರು 13 ವರ್ಷ ಶಾಸಕರಾಗಿ ಕ್ಷೇತ್ರದ ಅಭಿವೃದ್ಧಿಗೆ ಏನು ಮಾಡಿದ್ದಾರೆ ಎಂದು ಬಹಿರಂಗ ಚರ್ಚೆಗೆ ಬರಲಿ ಎಂದು ಸವಾಲು ಹಾಕಿದರು. ಗ್ರಾಮೀಣ ರಸ್ತೆಗಳು ಸೇರಿ ಮೂಲಸೌಕರ್ಯಗಳ ಅಭಿವೃದ್ಧಿಗೆ ಅನುದಾನ ಖರ್ಚು ಮಾಡಬೇಕು ಬದಲಾಗಿ ವೈಯಕ್ತಿಕ ಹಿತಾಸಕ್ತಿ ಕಾಮಗಾರಿಗಳು ಕೈಗೊಳ್ಳುವುದು ತರವಲ್ಲ. ಕ್ಷೇತ್ರದ ಅಭಿವೃದ್ಧಿ ಹಿತದೃಷ್ಟಿಯಿಂದ ಕೆಲಸ ಮಾಡಬೇಕು. ಕ್ಷೇತ್ರದ ಅಭಿವೃದ್ಧಿಗೆ ಸರ್ವ ಸಹಕಾರ ನೀಡುತ್ತೇವೆ ಒಣ ರಾಜಕೀಯ ಮಾಡಬಾರದು ಹೇಳಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಗೋವಿಂದ ನಾಯಕ, ಶಿವಶಂಕರಗೌಡ, ಗ್ಯಾರಂಟಿ ಯೋಜನೆ ತಾಲೂಕ ಅಧ್ಯಕ್ಷ ವೆಂಕಟೇಶ ಗುತ್ತೆದಾರ, ಕೆಪಿಸಿಸಿ ಸದಸ್ಯ ಅಮರಗುಂಡಪ್ಪ ಮೇಟಿ, ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸರೂರು, ಮಹ್ಮದ್ ರಫಿ, ಶಿವಣ್ಣ ನಾಯಕ ಕೋತಾ, ಉಮೇಶ ಹುನಕುಂಟಿ, ಸಂಜೀವಪ್ಪ ಹುನಕುಂಟಿ ಸೇರಿದಂತೆ ಇದ್ದರು

# ರೈತರು ಹೊಸ ಬೆಳೆಗೆ ಬದಲಾಗಲಿ: ಶಾಸಕರಾದ ಹಂಪನಗೌಡ ಬಾದರ್ಲಿ ಸಲಹೆ

ಲ್ಲಿನ ಸಂದೇಶ ಅರಿತು ಬದಲಾವಣೆಯತ್ತ ಹೆಜ್ಜೆ ಇಡಬೇಕು ಎಂದು ಮನವಿ ಮಾಡಿದರು. ಎರಡನೇ ವರ್ಷವೂ ಅದ್ದೂರಿ: ನಮ್ಮ ಸಿಂಧನೂರ ದಸರಾ ಉತ್ಸವವು ಎರಡನೇ ವರ್ಷಕ್ಕೆ ಕಾಲಿರಿಸಿ ಅದ್ದೂರಿಯಾಗಿ ನಡೆಯುತ್ತಿದೆ.

ಮೊದಲನೇ ವರ್ಷ ದಸರಾ ಕಾರ್ಯಕ್ರಮವು ಯಶ ಕಂಡ ಬಳಿಕ ತಾಲೂಕಿನ ಎಲ್ಲ ಭಾಗದ ಜನರು ಸೇರಿ ಗ್ರಾಮೀಣ ಪ್ರದೇಶದ ಜೊತೆಗೆ ಸಿಂಧನೂರ ಸಿಟಿಯಲ್ಲಿ ದಸರಾ ಆಚರಣೆ ಆಗಬೇಕು ಎಂದು ನಿರ್ಧರಿಸಿ ಈ ಬಾರಿ ಗ್ರಾಮೀಣ ದಸರಾ ಎಂದು ಐದು ದಿನಗಳ ಕಾಲ ಗ್ರಾಮಗಳಲ್ಲಿ ಕೂಡ ದಸರಾ ಕಾರ್ಯಕ್ರಮ ಮಾಡುತ್ತಿದ್ದೇವೆ. ಸಿಂಧನೂರ ಸೇರಿದಂತೆ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಉತ್ಸವದ ನಾನಾ ಕಾರ್ಯಕ್ರಮಗಳ ವೀಕ್ಷಣೆ ಮಾಡಬೇಕು ಎಂದು ಸಮಾರಂಭದ ಮೂಲಕ ಮನವಿ ಮಾಡಿದರು.

# ಸವಲತ್ತಿನ ಸದ್ಭಳಕೆ ಜತೆಗೆ ಕಾನೂನಿನ ಅರಿವು ಪಡೆಯಲು ಕಾರ್ಮಿಕರಿಗೆ ಸಲಹೆ

ಅಧಿಕಾರಿಗ ಳಾದ ಆರತಿ ಅವರು ಮಾತನಾಡಿ, ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಶೈಕ್ಷಣಿಕ ಸಹಾಯಧನ, ವೈದ್ಯಕೀಯ ಸಹಾಯಧನ, ಹೆರಿಗೆ ಸಹಾಯಧನ ಹಾಗೂ ಇತರೆ ಸಹಾಯಧನಗಳನ್ನು ಕಾರ್ಮಿಕ ಇಲಾಖೆಯಲ್ಲಿ ನೋಂದಣಿ ಮಾಡಿಸಿಕೊಳ್ಳುವುದರ ಮೂಲಕ ಸೌಲಭ್ಯಗಳನ್ನು ಪಡೆದುಕೊಳ್ಳುವಂತೆ ಕಾರ್ಮಿಕರಿಗೆ ಸಲಹೆ ನೀಡಿದರು.

ವಿವಿಧ ಯೋಜನೆಗಳ ಸೌಲಭ್ಯ: ಜಿಲ್ಲಾ ಕಾರ್ಮಿಕ ಇಲಾಖೆಯಿಂದ ಜಿಲ್ಲೆಯ ಕಾರ್ಮಿಕರು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ ವಿವಿಧ ಯೋಜನೆಗಳಾದ ಇ– ಶ್ರಮ ಯೋಜನೆಯಡಿಯಲ್ಲಿ 4,32,405, ಪ್ರಧಾನಮಂತ್ರಿ ಶ್ರಮಯೋಗಿ ಮಾನ್– ಧನ್ ಯೋಜನೆಯಡಿ 4,661, ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ 2685 ಸೇರಿದಂತೆ ಒಟ್ಟು 5,14,749 ಫಲಾನುಭವಿಗಳು ನೋಂದಣಿಯಾಗಿದ್ದಾರೆ. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಮದುವೆ ಧನ ಸಹಾಯ 571, ಪ್ರಮುಖ ವೈದ್ಯಕೀಯ 32, ಹೆರಿಗೆ ಧನ ಸಹಾಯ 150, ತಾಯಿ ಮಗು ಸಹಾಯ ಹಸ್ತದಡಿ 79 ಫಲಾನುಭವಿಗಳು ಸೌಲಭ್ಯ ಪಡೆದಿದ್ದು, 4,44,54,657 ರೂ.ಗಳನ್ನು ವೆಚ್ಚ ಮಾಡಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಆರತಿ ಅವರು ಉಪನ್ಯಾಸದಲ್ಲಿ ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷರಾದ ನಜೀರ್ ಮಹಮ್ಮದ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶರಣಮ್ಮ, ರಾಯಚೂರಿನ 1 ಹಾಗೂ 2ನೇ ವೃತ್ತದ ಕಾರ್ಮಿಕ ನಿರೀಕ್ಷಕರಾದ ಪ್ರಿಯಾಂಕ, ಕಾರ್ಮಿಕ ಇಲಾಖೆಯ ಎಕ್ಸಿಕ್ಯೂಟಿವ್ ಎನ್. ನಾಗರಾಜ, ಶ್ರೀಕಾಂತ್ ಸೇರಿದಂತೆ ವಿವಿಧ ಅಧಿಕಾರಿಗಳು ಹಾಗೂ ಕಾರ್ಮಿಕರು ಕಾರ್ಯಕ್ರಮದಲ್ಲಿ ಇದ್ದರು.

# ಭೈರಪ್ಪ ನಿಧನಕ್ಕೆ ಮೋದಿ, ಸಿಎಂ ಸೇರಿ ಗಣ್ಯರ ಕಂಬನಿ

ಭೈರಪ್ಪನವರ ನಿಧನದಿಂದ ಸಾಹಿತ್ಯಲೋಕ ಬಡವಾಗಿದೆ. ಅವರ ಕುಟುಂಬವರ್ಗ ಮತ್ತು ಓದುಗ ಬಳಗಕ್ಕೆ ಎಕ್ಸ್ ಖಾತೆಯಲ್ಲಿ ಸಂತಾಪ ವ್ಯಕ್ತಪಡಿಸಿದ್ದಾರೆ.

ಎಚ್ ಡಿಕೆ ಸಂತಾಪ; ಪರ್ವ' ಮತ್ತು 'ಉತ್ತರಕಾಂಡ' ಕಾದಂಬರಿಗಳ ಮೂಲಕ ಮಹಾಭಾರತ ಹಾಗೂ ರಾಮಾಯಣವನ್ನು ನೋಡುವ ಮತ್ತು ಓದುವ ಕ್ರಮವನ್ನೇ ಬದಲಿಸಿದ ಅಭಿಜಾತ ಕಾದಂಬರಿಕಾರ ಸರಸ್ವತಿ ಸಮ್ಮಾನ ಪುರಸ್ಕೃತರು, ಪದ್ಮಭೂಷಣ ಎಸ್.ಎಲ್. ಭೈರಪ್ಪನವರು ನಿಧನರಾದರೆಂಬ ಸುದ್ದಿ ಕೇಳಿ ತೀವ್ರ ಆಘಾತ ಉಂಟಾಯಿತು ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರ ಸ್ವಾಮಿ ಕಂಬನಿ ಮಿಡಿದಿದ್ದಾರೆ.

ಬಿಎಸ್ ವೈ ಸಂತಾಪ; ದೇಶ ವಿದೇಶಗಳ ಸಾಹಿತ್ಯಾಸಕ್ತರ ನೆಚ್ಚಿನ ಸಾಹಿತಿಗಳಾಗಿದ್ದ, ಹಿರಿಯ ಸಾಹಿತಿ ಭೈರಪ್ಪ ಅವರನ್ನು ಕಳೆದುಕೊಂಡು ಕನ್ನಡ ನಾಡು, ನುಡಿ ಅನಾಥವಾ ದಂತಾಗಿದೆ, ಒಬ್ಬ ದಿಗ್ಗಜ ಸಾಹಿತಿಯನ್ನು, ಸಾಧಕ ಶ್ರೇಷ್ಠರನ್ನು ನಾವು ಕಳೆದುಕೊಂಡಿದ್ದೇವೆ. ಆ ದಿವ್ಯ, ಸಾರಸ್ವತ ಚೇತನಕ್ಕೆ ದೇವರು ಸದ್ಗತಿಯನ್ನು ಕರುಣಿಸಲಿ ಎಂದು ಎಂದು ಮಾಜಿ ಮುಖ್ಯಮಂತ್ರಿ ಬಿ;ಎಸ್.ಯಡಿಯೂರಪ್ಪ ಪ್ರಾರ್ಥಿಸಿದ್ದಾರೆ.

# ಅ.07 ರಂದು ಮಹರ್ಷಿ ವಾಲ್ಮೀಕಿ ಜಯಂತಿ; ಜಿಲ್ಲಾಡಳಿತದಿಂದ ಅರ್ಥಪೂರ್ಣ ಆಚರಣೆ

**ಬಳ್ಳಾರಿ,ಸೆ.24–** ಬರುವ ಅಕ್ಟೋಬರ್ 07 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಜಿಲ್ಲಾಡಳಿತದಿಂದ ಅರ್ಥ ಪೂರ್ಣವಾಗಿ ಆಚರಿಸಲು ಎಲ್ಲಾ ರೀತಿಯ ಸಿದ್ಧತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಜಿಲ್ಲಾ ಕೇಂದ್ರದಲ್ಲಿ ಸೀಗೆ ಹುಣ್ಣಿಮೆ ದಿನದಂದು ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಕುರಿತಂತೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸೋಮವಾರ ಕರೆದಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಹನೀಯರ ಜೀವನ ಚರಿತ್ರೆ, ಸಮಾಜಕ್ಕೆ ನೀಡಿರುವ ಸಾಧನೆಯ ಕೊಡುಗೆಗಳ ಕುರಿತು ಮುಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಸರ್ಕಾರ ಜಯಂತಿ ಕಾರ್ಯಕ್ರಮಗಳನ್ನು ಆಚರಿಸಲು ನಿರ್ದೇಶಿದೆ. ಹಾಗಾಗಿ ಜಯಂತಿ ಕಾರ್ಯಕ್ರಮಗಳ ಯಶಸ್ವಿಗೆ ಎಲ್ಲರ ಸಹಕಾರವೂ ಅಗತ್ಯವಿದೆ ಎಂದು ತಿಳಿಸಿದರು.

ಅ.07 ರಂದು ಬೆಳಿಗ್ಗೆ 09 ಗಂಟೆಗೆ ನಗರದ ವಾಲ್ಮೀಕಿ ವೃತ್ತದ ಬಳಿಯ ಮಹರ್ಷಿ ವಾಲ್ಮೀಕಿ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುತ್ತದೆ. ಸುತ್ತಲೂ ಸ್ವಚ್ಛತೆ, ಅಲಂಕಾರ ವ್ಯವಸ್ಥೆ ಕೈಗೊಳ್ಳಬೇಕು ಎಂದು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬಳಿಕ ಶ್ರೀ ಕನಕದುರ್ಗಮ್ಮ ದೇವಸ್ಥಾನದಿಂದ ಮೆರವಣಿಗೆ ನಡೆಯಲಿದ್ದು, ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ಹಳೆ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಮುಂಭಾಗದಿಂದ ತೇರುಬೀದಿಯ ಮಾರ್ಗವಾಗಿ ಹೆಚ್.ಆರ್.ಗವಿಯಪ್ಪ ವೃತ್ತದಿಂದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ, ಬಳಿಕ ನಲ್ಲಚೇರುವು ಪ್ರದೇಶದ ವಾಲ್ಮೀಕಿ ಭವನದ ವೇದಿಕೆ ಕಾರ್ಯಕ್ರಮದವರೆಗೆ ನಡೆಯಲಿದ್ದು, ಸಂಚಾರ ಮಾರ್ಗಕ್ಕೆ ಅಡಚಣೆಯಾಗದಂತೆ ಸೂಕ್ತ ಬಂದೋಬಸ್ತ್ ಕೈಗೊಳ್ಳಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು.

ಮೆರವಣಿಗೆಯಲ್ಲಿ ರಾಮಾಯಣ ಕಥಾಸಂಗ್ರಹದ ವೇಷಧಾರಿಗಳು ಒಳಗೊಂಡ ಕಲಾತಂಡಗಳನ್ನು ನಿಯೋಜಿಸಲಾಗುವುದು. ವೇದಿಕೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಬೇಕು. ವಾಲ್ಮೀಕಿ ಅವರ ಕುರಿತು ಅಧ್ಯಯನ ಮಾಡಿರುವ ಸಂಪನ್ಮೂಲ ವ್ಯಕ್ತಿಯ ಉಪನ್ಯಾಸ ಆಯೋಜಿಸಬೇಕು. ಸಮಾಜದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರನ್ನು ಸನ್ಮಾನಿಸಲಾಗುವುದು. ಎಸ್.ಎಸ್.ಎಲ್.ಸಿ, ಪಿ.ಯು.ಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಸಮುದಾಯದ ವಿದ್ಯಾರ್ಥಿಗಳು ಹಾಗೂ ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳನ್ನು ಗೌರವಿಸಲಾಗುವುದು ಎಂದರು.

ಕಾರ್ಯಕ್ರಮದ ಬಳಿಕ ಊಟದ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಕೈಗೊಳ್ಳಬೇಕು ಎಂದರಲ್ಲದೇ, ಶಿಷ್ಠಾಚಾರದಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಲಾಗುವುದು. ಜನಪ್ರತಿನಿಧಿಗಳು, ಜಿಲ್ಲಾಮಟ್ಟದ ಅಧಿಕಾರಿಗಳು, ಸಿಬ್ಬಂದಿ, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಹಾಜರಿರಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಯಂತಿ ಆಚರಣೆಗೆ ಸಂಬಂಧಿಸಿದಂತೆ ಸಮಾಜದ ಮುಖಂಡರು ಸೂಕ್ತ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾ ರಾಣಿ ವಿ.ಜೆ., ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್.ಮಂಜುನಾಥ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ ಶಿವಪೂರೆ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ರಾಜು ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಜಿಲ್ಲೆಯ ವಿವಿಧ ಸಂಘ–ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಸಿರವಾರ: ಪೋಷಣ ಮಾಸಚರಣೆ ಕಾರ್ಯಕ್ರಮಕ್ಕೆ ಚಾಲನೆ



**ಯುವ ಮಾರ್ಗ ಸುದ್ದಿ**

**ಸಿರವಾರ, ಸೆ.23–**ಸಿರವಾರ ಪಟ್ಟಣದ ವಾರ್ಡ್ ನಂ: 15ರಲ್ಲಿರುವ ಅಂಗನವಾಡಿ ಕೇಂದ್ರದಲ್ಲಿ ಪೋಷಣ ಮಾಸಚರಣೆ ಕಾರ್ಯಕ್ರಮವನ್ನು ಗರ್ಭಿಣಿ ಸ್ತ್ರೀಯರೊಂದಿಗೆ ಪ.ಪಂ ಸದಸ್ಯರಾದ ಮೌಲಾಸಾಬ್ ವರ್ಚಸ್ ಅವರು ಚಾಲನೆ ನೀಡಿದರು.

ನಂತರ ಮಾತನಾಡಿದ ಪ.ಪಂ ಸದಸ್ಯರಾದ ಮೌಲಾಸಾಬ್ ವರ್ಚಸ್ ಅವರು ಪೋಷಣೆ ಮಾಸಚರಣೆ ಎನ್ನುವುದು ಗರ್ಭಿಣಿ ಸ್ತ್ರೀಯರಿಗೆ ಯಾವ ಸಮಯದಲ್ಲಿ ಎಂತಹ ಆಹಾರ ಸೇವನೆಮಾಡಬೇಕು ಎನ್ನುವುದು ತಿಳಿಸುವ ಯೋಜನೆಯಾಗಿದೆ, ದೇಶದಲ್ಲಿ ನಮ್ಮ ರಾಯಚೂರು ಜಿಲ್ಲೆ ಮಹತ್ವಕಾಂಕ್ಷಿ ಜಿಲ್ಲೆಯಾಗಿದೆ ನಮ್ಮ ಭಾಗದ ಮಹಿಳೆಯರು ಗರ್ಭಿಣಿಯಾಗಿ ಹೆಚ್ಚಿನ ಪೌಷ್ಟಿಕಾಂಶಯುಕ್ತ ಆಹಾರವನ್ನು ನಸೇವನೆಮಾಡಬೇಕು.

ಹಳೆ ಕಾಲದಲ್ಲಿ ಪೌಷ್ಟಿಕಾಂಸಯುಕ್ತ ಆಹಾರ ಇರುತ್ತಿತ್ತು ಆದರೆ ಈಗ ಆಹಾರದಲ್ಲಿ ಪೌಷ್ಟಿಕಾಂಶ ಇಲ್ಲದ ಕಾರಣ ಗರ್ಭಿಣಿ ಮಹಿಳೆಯರು ಎಂತಹ ಆಹಾರ ಸೇವನೆ ಮಾಡಬೇಕು ಎನ್ನುವುದು ವೈದ್ಯರ ಸಲಹೆ ಮೇರೆಗೆ ಪೌಷ್ಟಿಕಾಂಶಯುಕ್ತ ಆಹಾರ ಸೇವನೆ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಂಗನವಾಡಿ ಕೇಂದ್ರ ಸಂಖ್ಯೆ 1ರ ಕಾರ್ಯಕರ್ತೆಯಾದ ಶೈಲಜಾ ಹಾಗೂ ಅಂಗನವಾಡಿ ಕೇಂದ್ರ ಸಂಖ್ಯೆ 3ರ ಕಾರ್ಯಕರ್ತೆಯಾದಮಹೇಶ್ವರಿ ಹಾಗೂ ಅಂಗನವಾಡಿ ಸಹಾಯಕಿಯರಯ ಮತ್ತು ಗರ್ಭಿಣಿ ಸ್ತ್ರೀಯರು ಇದ್ದರು

# ರಾಷ್ಟ್ರೀಯ ಸೇವಾ ಯೋಜನಾ ಸಂಸ್ಥಾಪನಾ ದಿನ: ಬಾಷುಮಿಯಾ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಚರಣೆ




**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.24–** ರಾಷ್ಟ್ರೀಯ ಸೇವಾ ಯೋಜನೆ ಸ್ಥಾಪನಾ ದಿನವನ್ನು ನಗರದ ಬಾಷುಮಿಯಾ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮವು ಗಿಡ ನೆಡುವ ಮೂಲಕ ಉದ್ಘಾಟಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಭಾರಿ ಪ್ರಾಂಶುಪಾಲರಾದ ಸೈಯದ್ ಮಿನ್ಹಾಜ್–ಉಲ್–ಹಸನ್ ಅವರು ಮಾತನಾಡಿ 'ಸೇವೆ, ಸಮರ್ಪಣೆ, ಮತ್ತು ಸ್ವಚ್ಛತೆ' ನಮ್ಮ ಮೂಲ ಮಂತ್ರವಾಗಬೇಕು ಎಂದು ಕರೆ ನೀಡಿದ ಅವರು, ನಮ್ಮ ಕಾಲೇಜಿನ ವಿದ್ಯಾರ್ಥಿಗಳು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಸೇವಾ ನಾಯಕರಾಗಬೇಕೆಂದು ಹುರಿದುಂಬಿಸಿದರು.

ರಾಷ್ಟ್ರೀಯ ಸೇವಾ ಯೋಜನಾ ಘಟಕದ ಸಂಚಾಲಕರಾದ ಡಾ.ಸೈಯದ್ ಮುಜೀಬ್ ಅಹ್ಮದ್ ಅವರು ಪ್ರಾಸ್ತಾವಿಕ ಭಾಷಣ ಮಾಡಿದರು. ಅವರು ರಾಷ್ಟ್ರೀಯ ಸೇವಾ ಯೋಜನೆಯ ಇತಿಹಾಸ, ಮಹತ್ವ ಮತ್ತು ಅದರ ಧ್ಯೇಯವಾಕ್ಯದ ಕುರಿತು ವಿವರಿಸಿದರು. ಅಲ್ಲದೆ, ವಿದ್ಯಾರ್ಥಿಗಳು ಸೇವಾ ಮನೋಭಾವ ಮತ್ತು ಶಿಸ್ತನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ನಂತರ, 2024–25ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನಾ ವಾರ್ಷಿಕ ಶಿಬಿರದಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ರೆಡ್ ಕ್ರಾಸ್ ಘಟಕದ ಸಂಚಾಲಕರಾದ ಚಂದ್ರು, ಐ.ಕ್ಯೂ.ಎ.ಸಿ. ಸಂಚಾಲಕರಾದ ಶ್ರೀಧರ, ಸಾಂಸ್ಕೃತಿಕ ಸಂಚಾಲಕರಾದ ಡಾ. ಚನ್ನಬಸವ, ಎನ್.ಸಿ.ಸಿ. ಮತ್ತು ರೋವರ್ ಘಟಕದ ಸಂಚಾಲಕರಾದ ಉಸ್ಮಾನ್ ಬಾಷಾ ಮತ್ತು ಗ್ರಂಥಾಲಯ ಸಂಚಾಲಕಿಯಾದ ಕು. ಹರ್ಷಿತಾ, ಸುಧಾ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು. ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಸುಧಾ ಸಹ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕಾಲೇಜಿನ ವಿದ್ಯಾರ್ಥಿನಿ ಕು. ಸುಶ್ಮಿತಾ ನಿರೂಪಿಸಿದರು. ಕು. ರೇಣುಕಾ ಸ್ವಾಗತ ಭಾಷಣ ಮಾಡಿದರು, ಮತ್ತು ಕು. ಶಿವಕುಮಾರ್ ವಂದಿಸಿದರು.

# ದೇವಿ ಪುರಾಣ ಎಂದರೆ ಈ ಸೃಷ್ಟಿಯನ್ನು ಮಾಡಿರುವ ಜಗಜ್ಜನನಿಯನ್ನು ಸ್ಮರಣೆ ಮಾಡಿಕೊಳ್ಳುವುದು



**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.24–** ತಾಲೂಕಿನ ಕರೆಗುಡ್ಡ ಗ್ರಾಮದಲ್ಲಿನ ಶ್ರೀ ಮಹಾಂತೇಶ್ವರ ಮಠದಲ್ಲಿ ದಸರಾ ಹಬ್ಬದ ಅಂಗವಾಗಿ ನಡೆದ ಶ್ರೀ ದೇವಿ ಪುರಾಣ ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ವಹಿಸಿ ಜಗದ್ಗುರು ಕೊಟ್ಟೂರುಸ್ವಾಮಿ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಆರ್ಶೀವಚನ ನೀಡಿ ದೇವಿ ಪುರಾಣ ಎಂದರೆ ಈ ಸೃಷ್ಟಿಯನ್ನು ಮಾಡಿರುವ ಜಗಜ್ಜನನಿಯನ್ನು ಸ್ಮರಣೆ ಮಾಡಿಕೊಳ್ಳುವುದು. ಈ ಸೃಷ್ಟಿಗೆ ಕತೃವಾಗಿರುವಂತ. ಸೃಷ್ಟಿಯ ಚೈತನ್ಯವಾಗಿರುವಂತ ದೇವಿಯನ್ನು ಸ್ಮರಣೆ ಮಾಡುತ್ತ ದೇಹವನ್ನು ವಿಮರ್ಶೆ ಮಾಡಿಕೊಳ್ಳುವುದಾಗಿದೆ. ಜಗನ್ಮಾತೆ ದೇವಿಯ ಚರಿತ್ರೆಯೊಂದಿಗೆ ದೇಹದ ಚರಿತ್ರೆಯನ್ನು ವಿಮರ್ಶೆ ಮಾಡಿಕೊಳ್ಳುವುದರಿಂದ ಮನುಷ್ಯನಲ್ಲಿರುವ ಅಸುರಿ ಗುಣಗಳು ಹೋಗಿ ಸಾಮಾನ್ಯರಂತಾಗುತ್ತಾರೆ. ಹೆಚ್ಚು ಚೈತನ್ಯ ಹೊಂದಿದವರು ತಮ್ಮಲಿರುವ ದುರ್ಗಣಗಳನ್ನು ಕಂಡುಕೊಂಡು ಅವುಗಳನ್ನು ದೂರ ಮಾಡಿಕೊಂಡು ಸಂತರು,ಮಹಾಂತರು, ಸ್ವಾಮಿಗಳಾಗುತ್ತಾರೆ. ಶ್ರೀದೇವಿ ಪುರಾಣವನ್ನು ರಚಿಸಿರುವ ಚಿದಾನಂದ ವಧೂತರು ತಿಳಿಸಿದಂತೆ ದೇವಿ ಪುರಾಣ ಎಂದರೆ ನಮ್ಮ ದೇಹದ ಪುರಾಣವಾಗಿದೆ ನಾವು ಸಂತೋಷವಾಗಿ ಬಾಳಬೇಕು ಎಂದರೆ ಪುರಾಣ, ಪುಣ್ಯ ಕಥೆಗಳನ್ನು ಕೇಳಬೇಕು, ಸಾವಧಾನಿಗಳಾಗಿರಬೇಕು . ಸಂತರ ಮಹಾತ್ಮರ ದರ್ಶನ ಮಾಡಬೇಕು. ನಮ್ಮ ತಿಳುವಳಿಕೆಯನ್ನು ಹೆಚ್ಚುವುದಕ್ಕಾಗಿ ಶ್ರೀಮಠಗಳಲ್ಲಿ ನಡೆಯುವ ಪುರಾಣ ಪುಣ್ಯಕಥೆಗಳನ್ನು ಕೇಳಬೇಕು. ಪ್ರತಿಯೊಬ್ಬರು ಕೂಡ ತಮ್ಮಲಿನ ಅಸುರಿ ಗುಣಗಳನ್ನು ತ್ಯಾಗ ಮಾಡಿ ಉತ್ತಮ ಗುಣಗಳನ್ನು ರೂಡಿಸಿಕೊಳ್ಳಬೇಕು ಆಗ ಮಾತ್ರ ನಮ್ಮ ಜೀವನ ಸಂತೋಷಮಯವಾಗಿರುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ದೇವಿ ಪುರಾಣ ಪ್ರವಚನವನ್ನು ಮೈಸೂರಿನ ನಿರಂಜನದೇವರು ನೀಡಿದರು. ಸಂಗೀತ ಅಮರೇಶ ಸಾಲಿಮಠ ಕರೆಗುಡ್ಡ ನೀಡಿದರು. ಬಸವರಾಜ ಹಿರೆಮಠ ತಬಲಸಾಥ್ ನೀಡಿದರು. ಕರೆಗುಡ್ಡ , ಬ್ಯಾಗವಾಟ, ನಕ್ಕುಂದಿ, ಜಾನೆಕಲ್ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ಭಕ್ತರು, ಶ್ರೀಮಠದಲ್ಲಿನ ದೇವಿಯ ದರ್ಶನವನ್ನು ಪಡೆದುಕೊಂಡರು,

ಶ್ರೀ ಮಠದ ಶ್ರೀ ಮಹಾಂತಲಿಂಗ ಮಹಾಸ್ವಾಮಿಗಳು, ಕಿರಿಯ ಶ್ರೀಗಳಾದ ಸಂಗನಬಸವ ದೇವರು,ಸೇರಿದಂತೆ ಇನ್ನಿತರರು ಇದ್ದರು.

ಯುವ ಮಾರ್ಗ

ಗುರುವಾರ : 25–09–2025

# ಖ್ಯಾತ ಕಾದಂಬರಿಕಾರ ಪದ್ಮಭೂಷಣ ಎಸ್ ಎಲ್ ಭೈರಪ್ಪ ನಿಧನ

**ಬೆಂಗಳೂರು,ಸೆ.24–**ಕನ್ನಡದ ಖ್ಯಾತ ಕಾದಂಬರಿಕಾರ, ಚಿಂತಕ, ಪದ್ಮಭೂಷಣ, ಸರಸ್ವತಿ ಸಮ್ಮಾನ್ ಪುರಸ್ಕೃತ ಸಾಹಿತಿ ಎಸ್ ಎಲ್ ಭೈರಪ್ಪ ಅವರು ನಿಧನರಾಗಿದ್ದಾರೆ.

ಅಲ್ಪಕಾಲದ ಅಸೌಖ್ಯದಿಂದ ಬಳಲುತ್ತಿದ್ದ ಅವರು ರಾಜರಾಜೇಶ್ವರಿನಗರದ ರಾಷ್ಟ್ರೋತ್ಥಾನ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ 94 ವರ್ಷ ವಯಸ್ಸಾಗಿತ್ತು. ಹಾಸನ ಜಿಲ್ಲೆಯ ಸಂತೇಶಿವರದಲ್ಲಿ ಜನಿಸಿದ್ದ ಅವರು ತಮ್ಮ ಕೃತಿಗಳ ಮೂಲಕ ಕನ್ನಡದ ಹೆಮ್ಮೆಯನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಎತ್ತಿ ಹಿಡಿದಿದ್ದರು. ಅವರು ಪತ್ನಿ, ಇಬ್ಬರು ಮಕ್ಕಳನ್ನು ಅಗಲಿದ್ದಾರೆ.

ವಯೋಸಹಜ ಕಾಯಿಲೆ ಬಳಲುತ್ತಿದ್ದ ಭೈರಪ್ಪ ಅವರು ಮರುವಿನ ಕಾಯಿಲೆ ಸಹ ಇತ್ತು. ಹೀಗಾಗಿ ಅವರು 3 ತಿಂಗಳಿನಿಂದ ಮೈಸೂರು ಬಿಟ್ಟು ಬೆಂಗಳೂರಿನಲ್ಲಿ ವಾಸವಾಗಿ ದ್ದರು. 94 ವರ್ಷದ ಹಿರಿಯ ಸಾಹಿತಿ ಎಸ್ ಎಲ್ ಭೈರಪ್ಪ ಅವರು ಒಬ್ಬ ಪ್ರಸಿದ್ಧ ಕನ್ನಡ ಕಾದಂಬರಿಕಾರ, ತತ್ವಜ್ಞಾನಿ ಮತ್ತು ಲೇಖಕರಾಗಿದ್ದು, 2023ರಲ್ಲಿ ಇವರಿಗೆ ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿದ್ದರು.


ಸಂತೇಶಿವರ ಲಿಂಗಣ್ಣಯ್ಯ ಭೈರಪ್ಪ ಆಧುನಿಕ ಕನ್ನಡ ಸಾಹಿತ್ಯದ ಕಾದಂಬರಿಕಾರರು ಮತ್ತು ಲೇಖಕರು. ಕನ್ನಡ ಭಾಷೆಯಲ್ಲಿ ಪುಸ್ತಕಗಳನ್ನು ಬರೆದಿರುವ ಇವರ ಕೃತಿಗಳು ಇಂಗ್ಲೀಷ್ ಹಾಗೂ ಭಾರತೀಯ ಭಾಷೆಗಳಿಗೆ ಅನುವಾದಗೊಂಡು ಭಾರತದ ಸಾಹಿತ್ಯವಲಯದಲ್ಲಿ ಹೆಸರಾಗಿದ್ದಾರೆ.

ಇವರ ಕಾದಂಬರಿಗಳು ಹಲವಾರು ಮರುಮುದ್ರಣಗಳನ್ನು ಕಂಡು ಕನ್ನಡದ ಜನಪ್ರಿಯ ಬರಹಗಾರರಾಗಿದ್ದಾರೆ. ಇವರಿಗೆ ಭಾರತ ಸರ್ಕಾರವು 2023ನೇ ಸಾಲಿನಲ್ಲಿ ಪದ್ಮಭೂಷಣ ಪ್ರಶಸ್ತಿ ನೀಡಿ ಗೌರವಿಸಿದೆ.

ಭಾರತದಲ್ಲಿ ಅತೀ ಹೆಚ್ಚು ಮಾರಾಟವಾಗುವ ಕಾದಂಬರಿಗಳ ಕರ್ತೃ ಯಾರು ಅಂತ ಕೇಳಿದರೆ ನಿಸ್ಸಂಶಯವಾಗಿಯೂ ಅದು ಕನ್ನಡಿಗರಾದ ಎಸ್ ಎಲ್ ಭೈರಪ್ಪ. ಕನ್ನಡದ ಯಾವ ಕಾದಂಬರಿಕಾರರ ಕೃತಿಗಳು ಅತಿ ಹೆಚ್ಚು ಭಾಷೆಗಳು ಅನುವಾದಗೊಂಡಿವೆ ಅಂತ ಯಾರಾದರೂ ಕೇಳಿದರೆ ಅದಕ್ಕೆ ಉತ್ತರ ಭೈರಪ್ಪ. ರಷ್ಯನ್, ಜರ್ಮನ್ ದೇಶಗಳಲ್ಲೂ ಪ್ರಖ್ಯಾತರಾಗಿರುವ ಕನ್ನಡದ ಲೇಖಕರು ಯಾರು ಎಂದರೆ ಭೈರಪ್ಪ.

ಬರವಣಿಗೆಯಿಂದ ಬಂದ ಹಣವನ್ನೆಲ್ಲಾ ಬಡ, ಅನಾಥ ಮಕ್ಕಳ ಶಿಕ್ಷಣಕ್ಕಾಗಿ ವಿನಿಯೋಗ ಮಾಡುತ್ತಿರುವವರು ಯಾರು ಎಂದು ಕೇಳಿದರೆ ಉತ್ತರ ಭೈರಪ್ಪ. ಕನ್ನಡದಲ್ಲಿ ಯಾರ ಕಾದಂಬರಿಗಳು ಅತಿ ಹೆಚ್ಚು ಸಿನಿಮಾ ಆಗಿವೆ ಎಂದು ಕೇಳಿದರೆ ಅವರು ಭೈರಪ್ಪ. ಹೀಗೆ ಕನ್ನಡದ ಕೀರ್ತಿಧ್ವಜವನ್ನು ಜಗತ್ತಿನ ಎಲ್ಲೆಡೆ ಕಾಣಿಸುವಂತೆ ಎತ್ತಿ ಹಿಡಿದ ಕಾದಂಬರಿಕಾರ, ಲೇಖಕ, ಚಿಂತಕ, ಸರಸ್ವತಿ ಸಮ್ಮಾನ್ ಪುರಸ್ಕೃತ, ಅವರೇ ಎಸ್‌ಎಲ್ ಭೈರಪ್ಪ.

ಭೈರಪ್ಪನರು ಹುಟ್ಟಿದ್ದು 1931ರ ಆಗಸ್ಟ್ 20ರಂದು ಚನ್ನರಾಯ ಪಟ್ಟಣದ ಬಳಿಯ ಸಂತೇಶಿವರ ಎಂಬ ಗ್ರಾಮದಲ್ಲಿ. ಕಿತ್ತು ತಿನ್ನುವ ಬಡತನ, ಬೇಜವಾಬ್ದಾರಿ ತಂದೆ, ಪ್ಲೇಗ್ ಮಾರಿಯಿಂದ ತತ್ತರಗೊಂಡ ಪರಿಸರ ಈ ಎಲ್ಲಾ ಪ್ರತಿಕೂಲ ಸಂದರ್ಭಗಳ ನಡುವೆಯೂ ಸಣ್ಣವಯಸ್ಸಿನಿಂದಲೇ ತಮ್ಮ ತಾಯಿಯಲ್ಲಿದ್ದ ಧೀಮಂತಿಕೆಯನ್ನು ಮೈಗೂಡಿಸಿಕೊಂಡರು. ತಮ್ಮ ಪ್ರಾಥಮಿಕ ವಿದ್ಯಾಭ್ಯಾಸವನ್ನು ತಾವು ಹುಟ್ಟಿದ ಹಳ್ಳಿಯಲ್ಲಿ ಹಾಗೂ ಅದರ ಸುತ್ತಮುತ್ತ ಪ್ರದೇಶಗಳಲ್ಲಿ ಭೈರಪ್ಪನವರು ಸಾಗಿಸಿದರು. ಆಗ ಅವರ ಹಳ್ಳಿಯಲ್ಲಿ ಓದಲು ಅನುಕೂಲವಿರಲಿಲ್ಲ. ಅವರ ತಾಯಿ ಅವರನ್ನು ತಮ್ಮ ಸೋದರಮಾವನ ಬಳಿ ಕಲಿಯಲು ಬಿಟ್ಟಿದ್ದರು. ಸ್ಥಳೀಯ ದೇವಾಲಯದ ಅರ್ಚಕನಾಗಿದ್ದ ಸೋದರಮಾವ, ಭೈರಪ್ಪನವರನ್ನು ಚೆನ್ನಾಗಿ ದುಡಿಸಿಕೊಳ್ಳುತ್ತ, ಅವರನ್ನು ಥಳಿಸುತ್ತ, ನೋಡಿಕೊಳ್ಳುವ ಹೆಸರಿನಲ್ಲಿ ಕಠಿಣ ಶಿಕ್ಷೆಗೆ ಒಳಪಡಿಸುತ್ತಿದ್ದ. ಸೋದರ ಮಾವನ ಕ್ಷುಲ್ಲಕತನ, ಆತನ ರಾಸಲೀಲೆ, ತಮ್ಮ ಅಸಹಾಯಕತೆ, ಪ್ಲೇಗ್ ಭೀಕರತೆ ಎಲ್ಲವನ್ನೂ ಅವರು ಮುಂದೆ ತಮ್ಮ ಆತ್ಮಕಥೆ ಭಿತ್ತಿಯಲ್ಲಿ ಬಿಚ್ಚಿಟ್ಟರು.



ಭೈರಪ್ಪ ಅವರು ಪರ್ವ, ಆವರಣ, ಗೃಹಭಂಗ ಸೇರಿದಂತೆ ಅನೇಕ ಕಾದಂಬರಿಗಳನ್ನು ಬರೆದಿದ್ದಾರೆ. ಭೈರಪ್ಪ ಅವರು ಹಾಸನ ಜಿಲ್ಲೆಯ ಸಂತೇಶಿವಾರ ಗ್ರಾಮದವರು. ತಮ್ಮ ಸ್ವಗ್ರಾಮದ ಕೆರೆಗಳಿಗೆ ನೀರು ತುಂಬಿಸಲು ಕೂಡ ಶ್ರಮಿಸಿದ್ದರು. ಬಾಲ್ಯದಲ್ಲಿ ಕಷ್ಟದಲ್ಲೇ ಬೆಳೆದು ವಿದ್ಯಾಭ್ಯಾಸ ಮಾಡಿದ್ದರು. ಮೈಸೂರಿನಲ್ಲಿ ವಿಶ್ರಾಂತ ಜೀವನ ನಡೆಸುತ್ತಿದ್ದರು ಪ್ರಧಾನಿ ಮೋದಿ ಅವರನ್ನು ಬೆಂಬಲಿಸುತ್ತಿದ್ದರು.

ಭೈರಪ್ಪ ಅವರಿಗೆ ಜ್ಞಾನಪೀಠ ಪ್ರಶಸ್ತಿ ನೀಡಬೇಕೆಂದು ಅವರ ಓದುಗ ಅಭಿಮಾನಿಗಳು ಒತ್ತಾಯಿಸುತ್ತಿದ್ದರು. ಆದ್ರೆ, ಜ್ಞಾನಪೀಠ ಪ್ರಶಸ್ತಿಗೆ ಪರ್ಯಾಯವಾದ ಸರಸ್ವತಿ ಸಮ್ಮಾನ್ ಪ್ರಶಸ್ತಿ ಭೈರಪ್ಪ ಅವರಿಗೆ ಬಂದಿತ್ತು.

**ಭೈರಪ್ಪ ಅವರ ಕಾದಂಬರಿಗಳು**

ಭೀಮಕಾಯ(1952), ಬೆಳಕು ಮೂಡಿತು(1959), ಧರ್ಮಶ್ರೀ  (1961), ದೂರ ಸರಿದರು(1967), ಮತದಾನ (1965), ವಂಶವೃಕ್ಷ(1965), ಜಲಪಾತ (1967), ನಾಯಿ ನೆರಳು (1968), ತಬ್ಬಲಿಯು ನೀನಾದೆ ಮಗನೆ(1968), ಗೃಹಭಂಗ(1970), ನಿರಾಕರಣ–(1971), ಗ್ರಹಣ–(1972), ದಾಟು (1973), ಅನ್ವೇಷಣ(1976), ಪರ್ವ(1979), ನೆಲೆ (1983), ಸಾಕ್ಷಿ (1986) ಅಂಚು–(1990), ತಂತು (1993), ಸಾರ್ಥ(1998), ಮಂದ್ರ(2001), ಆವರಣ(2007), ಕವಲು (2010), ಯಾನ (2014) ಉತ್ತರಕಾಂಡ–(2017).

ಸಂತೇಶಿವರ ಲಿಂಗಣ್ಣಯ್ಯ ಭೈರಪ್ಪ ಎಂಬುದು ಎಸ್.ಎಲ್. ಬೈರಪ್ಪ ಅವರ ಪೂರ್ಣ ಹೆಸರು. ಭೈರಪ್ಪ ಅವರು ಕಾದಂಬರಿಗಳಲ್ಲದೆ ಸೌಂದರ್ಯಮೀಮಾಂಸೆ, ತತ್ವಶಾಸ್ತ್ರದ ಕುರಿತು ಅನೇಕ ಗ್ರಂಥಗಳನ್ನು ರಚಿಸಿದ್ದಾರೆ. ಪ್ರಮುಖ ಕೃತಿಗಳೆಂದರೇ, ವಂಶವೃಕ್ಷ, ದಾಟು, ತಂತು, ಅಂಚು, ಪರ್ವ, ಗೃಹಭಂಗ, ಅನ್ವೇಷಣ, ಮಂದ್ರ, ಸಾರ್ಥ, ನಾಯಿನೆರಳು, ಧರ್ಮಶ್ರೀ, ದೂರಸರಿದರು, ಮತದಾನ ಮುಂತಾದವು ಅವರ ಕಾದಂಬರಿಗಳಾಗಿವೆ. ಬೈರಪ್ಪ ಅವರಿಗೆ ಬಂದ ಪದವಿಗಳು ಮತ್ತು ಪ್ರಶಸ್ತಿಗಳು ಅಂದರೇ, ಭೈರಪ್ಪ ಅವರಿಗೆ 2010ರಲ್ಲಿ ಸರಸ್ವತಿ ಸಮ್ಮಾನ್, 2015ರಲ್ಲಿ ಸಾಹಿತ್ಯ ಅಕಾಡೆಮಿ ಫೆಲೋಶಿಪ್, 2016ರಲ್ಲಿ ಪದ್ಮಶ್ರೀ, ಮತ್ತು 2023ರಲ್ಲಿ ಪದ್ಮಭೂಷಣ ಪ್ರಶಸ್ತಿಗಳು ಲಭಿಸಿವೆ. ವಿಶೇಷತೆ ಅಂದರೆ, ಭೈರಪ್ಪನವರ ಕಾದಂಬರಿಗಳು ವೈವಿಧ್ಯಮಯ ವಿಷಯಗಳನ್ನು ಒಳಗೊಂಡಿದ್ದು, ಅನೇಕ ಸಾರ್ವಜನಿಕ ಚರ್ಚೆಗಳಿಗೆ ಕಾರಣವಾಗಿವೆ.

# ರೈತರ ಕಷ್ಟಕ್ಕೆ ಸರ್ಕಾರ ಸ್ಪಂದಿಸಲಿ– ನಾಗರಾಜ ಶೇಗಜಿ ಕಳೆದ

**ಯುವ ಮಾರ್ಗ ಸುದ್ದಿ**

**ಆಳಂದ,ಸೆ.24–**ಒಂದು ತಿಂಗಳಿಂದ ಆಳಂದ ತಾಲ್ಲೂಕಿನಲ್ಲಿ ಸುರಿಯುತ್ತಿರುವ ಭಾರಿ ಮಳೆಯಿಂದ ರೈತರ ಹೊಲಗಳು, ಬೆಳೆಗಳು, ರಸ್ತೆ ಮತ್ತು ಮನೆಗಳು ತೀವ್ರ ಹಾನಿಗೊಳಗಾಗಿವೆ ಇದಕ್ಕೆ ಸಾಲಮನ್ನಾ ಮತ್ತು ಪರಿಹಾರವೇ ದಾರಿಯಾಗಿದೆ ಎಂದು ಆಳಂದ ತಾಲೂಕಾ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ನಾಗರಾಜ ಶೇಗಜಿ ಧಂಗಾಪೂರ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ತಾಲ್ಲೂಕಿನ ಜೀವನಾಡಿ ಅಮರ್ಜಾ ಅಣೆಕಟ್ಟು ಸಂಪೂರ್ಣವಾಗಿ ತುಂಬಿ ನೀರು ಬಿಡುವುದರಿಂದ ಭೂಸನೂರ, ಧಂಗಾಪೂರ, ಕೋರಳ್ಳಿ, ದೇವಂತಗಿ, ಜವಳಿ ಡಿ, ಬಟ್ಟರ್ಗಾ, ಹಿತ್ತಲಶಿರೂರ ಮತ್ತು ಕುಡಕಿ ಗ್ರಾಮಗಳ ಸಾವಿರಾರು ಎಕರೆ ಜಮೀನುಗಳು ಜಲಾವೃತಗೊಂಡಿವೆ ಎಂದು ಹೇಳಿದ್ದಾರೆ.

ಪ್ರಮುಖ ಬೆಳೆಗಳಾದ ಕಬ್ಬು, ತೊಗರಿ, ಉದ್ದು, ಸೋಯಾಬೀನ್, ಬಾಳೆಹಣ್ಣು, ಕಾಯಿಪಲ್ಲೆ ಸಂಪೂರ್ಣ ನಾಶವಾಗಿದ್ದು ರೈತರು ಕಣ್ಣೀರಿನಲ್ಲಿ ಕೈ ತೊಳೆಯುತ್ತಿರುವ ಸ್ಥಿತಿ ನಿರ್ಮಾಣವಾಗಿದೆ. ಮನೆಗಳು ಹಾಗೂ ಸಂಪರ್ಕ ರಸ್ತೆಗಳು, ಸೇತುವೆಗಳು ಹಾನಿಗೊಳಗಾಗಿದ್ದು, ಗ್ರಾಮಸ್ಥರು ತೀವ್ರ ಸಂಕಷ್ಟದಲ್ಲಿದ್ದಾರೆ ಎಂದು ಅಲವತ್ತುಕೊಂಡಿದ್ದಾರೆ.

ಹಾನಿಗೊಳಗಾದ ಬೆಳೆಗಳಿಗೆ ತಕ್ಷಣ ಪ್ರತಿ ಎಕರೆಗೆ ಸೂಕ್ತ ಪರಿಹಾರ ಘೋಷಿಸಬೇಕು. ಬೆಳೆ ಸಾಲ ಮನ್ನಾ ಮಾಡಿ, ಹೊಸ ಬೆಳೆ ಬೆಳೆಸಲು ಬಿತ್ತನೆ ಬೀಜ ಮತ್ತು ರಸಗೊಬ್ಬರ ಉಚಿತವಾಗಿ ನೀಡಬೇಕು. ಹಾನಿಗೊಳಗಾದ ಮನೆಗಳಿಗೆ ಕನಿಷ್ಠ ರೂ. 5 ಲಕ್ಷ



ಪರಿಹಾರ ನೀಡಬೇಕು. ಗ್ರಾಮಾಂತರ ರಸ್ತೆಗಳು ಮತ್ತು ಸೇತುವೆಗಳ ತ್ವರಿತ ದುರಸ್ತಿ ಕಾರ್ಯ ಕೈಗೊಳ್ಳಬೇಕು. ಪ್ರವಾಹ ಪೀಡಿತರಿಗೆ ತಕ್ಷಣವೇ ತಾತ್ಕಾಲಿಕ ಆಶ್ರಯ, ಆಹಾರ ಮತ್ತು ವೈದ್ಯಕೀಯ ಸಹಾಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.

**ಇಂದಿನ ಪರಿಸ್ಥಿತಿಯಲ್ಲಿ ರೈತರು ತಮ್ಮ ಬದುಕು ಉಳಿಸಿಕೊಳ್ಳುವುದೇ ಕಷ್ಟವಾಗಿದೆ. ಸರ್ಕಾರವು ತಕ್ಷಣ ಕ್ರಮ ಕೈಗೊಂಡು ರೈತರ ಸಾಲ ಮನ್ನಾ ಮಾಡಿ ಅದರ ಜೊತೆಗೆ ಪ್ರತಿ ಎಕರೆಗೆ 35,000 ರೂ ಪರಿಹಾರ ಘೋಷಿಸದಿದ್ದರೆ, ನಾವು ರೈತ ಸಮುದಾಯದೊಂದಿಗೆ ಕಠಿಣ ಹೋರಾಟ ನಡೆಸುತ್ತೇವೆ. ರೈತರ ಕಣ್ಣೀರನ್ನು ಒರೆಸುವುದು ಸರ್ಕಾರದ ಮೊದಲ ಕರ್ತವ್ಯವಾಗಲಿ– ನಾಗರಾಜ ಶೇಗಜಿ, ಧಂಗಾಪೂರ, ಅಧ್ಯಕ್ಷರು ಬಿಜೆಪಿ ರೈತ ಮೋರ್ಚಾ, ಆಳಂದ**


# ನಗರದ ವಿವಿಧ ಪ್ರದೇಶಗಳಿಗೆ ಶಾಸಕ,ಮೇಯರ್ ಉಪಮೇಯರ್ ಭೇಟಿ



**ಕಲಬುರಗಿ,ಸೆ.24–** ಕಲಬುರಗಿ ದಕ್ಷಿಣ ಮತಕ್ಷೇತ್ರದ ಶಾಸಕರಾದ ಅಲ್ಲಮಪ್ರಭು ಪಾಟೀಲ, ಮಹಾನಗರ ಪಾಲಿಕೆ ಮಹಾಪೌರರಾದ ವರ್ಷಾ ರಾಜೀವ ಜಾನೆ, ಉಪ ಮಹಾಪೌರರಾದ ತೃಪ್ತಿ ಎಸ್. ಲಾಖೆ ಹಾಗೂ ಪಾಲಿಕೆಯ ಮಾ ಆಯುಕ್ತರಾದ ಶಿಂಧೆ ಅವಿನಾಶ್ ಸಂಜೀವನ್ ಅವರು ನಗರದ ವಿವಿಧ ಪ್ರದೇಶಗಳಲ್ಲಿ ಪರಿವೀಕ್ಷಣೆ ಮಾಡಿ, ಅಕಾಲಿಕ ಮಳೆಯಿಂದ ಹಾನಿಗೊಳಗಾದ ರಸ್ತೆಗಳು ಮತ್ತು ಒಳ ಚರಂಡಿಗಳನ್ನು ಕೂಡಲೇ ದುರಸ್ತಿ ಮಾಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ವಾರ್ಡ್ ನಂ. 54ರಲ್ಲಿ ಬರುವ ತಾರಫೈಲ್, ರೆಹಮತ್ ನಗರದಲ್ಲಿ ಪರಿವೀಕ್ಷಣೆ ಮಾಡಿ, ಮುಚ್ಚಿ ಹೋದ ಒಳ ಚರಂಡಿಗಳನ್ನು ಕೂಡಲೇ ತೆರವುಗೊಳಿಸುವಂತೆ ಮತ್ತು ಮಳೆಯಿಂದ ಹಾಳಾದ ರಸ್ತೆಗಳ ದುರಸ್ತಿ ಮಾಡಿದುವಂತೆ ಹಾಗೂ ರಸ್ತೆಯ ತಗ್ಗು–ದಿಣ್ಣೆಗಳನ್ನು ಮುಚ್ಚಿಸುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು. ರಸ್ತೆಗಳ ಮೇಲೆ ಎಲ್ಲೆಂದರಲ್ಲಿ ಎಸೆಯಲಾದ ಕಸವನ್ನು ಕೂಡಲೇ ವಿಲೇವಾರಿ ಮಾಡುವಂತೆ ಸ.ಕಾ.ಅಭಿಯಂತ (ಪರಿಸರ) ಅಭಯ್ ಕುಮಾರಗೆ ಸೂಚಿಸಿದರು. ನಂತರ ಮಾಧ್ಯಮದೊಂದಿಗೆ ಮಾತನಾಡಿದ ಮಹಾಪೌರರು ಮತ್ತು ಆಯುಕ್ತರು ಎಂಜಿಎಲ್‌ವಿವೈ 2.0 ಯೋಜನೆ ಅಡಿಯಲ್ಲಿ ಕಾಮಗಾರಿಗಳನ್ನು ಇರಿಸಲಾಗಿದ್ದು, ಅವುಗಳನ್ನು ಶೀಘ್ರದಲ್ಲಿಯೇ ಟೆಂಡರ್ ಪ್ರಕ್ರಿಯೆ ಕೈಗೊಂಡು ಕಾರ್ಯರೂಪಕ್ಕೆ ತರಲಾಗುವುದೆಂದು ಮತ್ತು ಆದ್ಯತೆಯ ಮೇರೆಗೆ ಸಾರ್ವಜನಿಕರ ಕುಂದುಕೊರತೆಗಳನ್ನು ಬಗೆಹರಿಸಲಾಗುವುದೆಂದು ತಿಳಿಸಿದರು. ಈ ಸಂದರ್ಭದಲ್ಲಿ ಪಾಲಿಕೆಯ ಕಾ.ಪಾ.ಅ ಪುರುಷೋತ್ತಮ್, ಕೆ.ಯು.ಐ.ಡಿ.ಎಫ್.ಸಿ. ಯ ಕಾ.ಪಾ.ಅ ಭೀಮರಾವ ವದ್ರಿ ಮತ್ತು ವಾರ್ಡ್ ನಂ. 54ರ ಸದಸ್ಯರು, ಐ & ಟಿ ಅಧಿಕಾರಿ,ಸಿಬ್ಬಂದಿಗಳು, ಪಾಲಿಕೆಯ ನೈರ್ಮಲ್ಯ ನಿರೀಕ್ಷಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

# ಜಂಬೂ ಸವಾರಿ ವೀಕ್ಷಣೆ ಆಸನ ಸಾಮರ್ಥ್ಯ ಸಂಖ್ಯೆ ಇಳಿಕೆ



**ಮೈಸೂರು,ಸೆ. 24–**ಆರ್‌ಸಿಬಿ ವಿಜಯೋತ್ಸವ ವೇಳೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಘಟನೆ ಬಳಿಕ ಎಚ್ಚೆತ್ತ ರಾಜ್ಯ ಸರ್ಕಾರ ಜನರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಲು ಅಕ್ಟೋಬರ್ 2 ರಂದು ಅರಮನೆ ಆವರಣದಲ್ಲಿ ನಡೆಯಲಿರುವ ಜಂಬೂ ಸವಾರಿ ಮೆರವಣಿಗೆಯ ಆಸನ ಸಾಮರ್ಥ್ಯವನ್ನು 65 ಸಾವಿರದಿಂದ 40 ಸಾವಿರಕ್ಕೆ ಇಳಿಕೆ ಮಾಡಲು ನಿರ್ಧರಿಸಿದೆ.

ಈ ವರ್ಷ ಕನಿಷ್ಠ 25 ಸಾವಿರ ಆಸನಗಳನ್ನು ಕಡಿಮೆ ಮಾಡಲಾಗುವುದು. ದೊಡ್ಡ ಸಭೆಗಳನ್ನು ನಿರ್ವಹಿಸುವ ಬಗ್ಗೆ ಹೆಚ್ಚು ಜಾಗರೂಕರಾಗಿರಲು ಪಾಸ್‌ಗಳನ್ನೂ ಕೂಡ ಕಡಿಮೆ ಮುದ್ರಿಸಲಾಗಿದೆ.

ಮೈಸೂರು ಜಿಲ್ಲಾ ಸಚಿವ ಡಾ. ಎಚ್.ಸಿ. ಮಹದೇವಪ್ಪ ಅವರು ಅಧಿಕಾರಿಗಳ ಮತ್ತು ದಸರಾ ಉಪಸಮಿತಿಯ ಸಭೆ ನಡೆಸಿ, ದಸರಾ ಹಬ್ಬ ಮತ್ತು ಸುರಕ್ಷಿತಾಕ್ರಮ ಅಗತ್ಯ ಕುರಿತು ಸೂಚನೆಗಳನ್ನು ನೀಡಿದ್ದಾರೆ.ಕಳೆದ ವರ್ಷ ಸುಮಾರು 60 ಸಾವಿರವಿದ್ದ ಆಸನ ವ್ಯವಸ್ಥೆಯನ್ನು ಈ ವರ್ಷ 45 ಸಾವಿರ ಅಥವಾ ಅದಕ್ಕಿಂತ ಕಡಿಮೆಗೆ ಇಳಿಸಲಾಗುವುದು.

ವಿಜಯದಶಮಿ ದಿನದಂದು ನಡೆಯುವ ದಸರಾ ಜಂಬೂ ಸವಾರಿಗೆ ಅತೀ ಹೆಚ್ಚು ಜನರು ಆಗಮಿಸುತ್ತಾರೆ. ಚಾಮುಂಡೇಶ್ವರಿ ದೇವಿಯ ಚಿನ್ನದ ಅಂಬಾರಿಯನ್ನು ಹೊತ್ತೊಯ್ಯುವ ಆನೆಯನ್ನು ವೀಕ್ಷಿಸಲು ಲಕ್ಷಾಂತರ ಜನರು ಸೇರುತ್ತಾರೆ.

ಪ್ರತಿ ವರ್ಷ ಪಾಸ್‌ಗಳ ಅವ್ಯವಸ್ಥೆ, ಸಾಮರ್ಥ್ಯಕ್ಕಿಂತ ಹೆಚ್ಚಿನ ಪಾಸ್‌ಗಳನ್ನು ಮುದ್ರಿಸಲಾಗುತ್ತಿದೆ, ಲಾಬಿ ನಡೆಸಲಾಗುತ್ತದೆ ಎಂಬ ದೂರುಗಳು ಕೇಳಿಬರುವ ಹಿನ್ನೆಲೆಯಲ್ಲಿ ವರ್ಷ ಉಪಸಮಿತಿಯು ಆಸನ ಲಭ್ಯತೆ ಇರುವಷ್ಟು ಮಾತ್ರ ಮುದ್ರಿಸಲು ನಿರ್ಧರಿಸಿದೆ.

# ಸಿಂಧನಕೇರಾ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ವಿರುದ್ದ ಕ್ರಮಕ್ಕೆ ಆಗ್ರಹ

**ಹುಮನಾಬಾದ,ಸೆ.24–** ತಾಲ್ಲೂಕಿನ ಸಿಂಧನಕೇರಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಸಾಮಾಜಿಕ ಕಾರ್ಯಕರ್ತರಾದ ಯುವರಾಜ್ ಎಸ್.ಐಹೊಳ್ಳೆರವರಿಗೆ ದಿನಾಂಕ:22–9–2025 ರಂದು ರಾತ್ರಿ 8:14 ಸಮಯದಂದು ಫೋನ್ ಮಾಡಿ ಬೆದರಿಕೆ ಹಾಕಿರುತ್ತಾರೆ ಎಂದು ತಹಸೀಲ್ದಾರರಿಗೆ ಬರೆದ ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

ಯುವರಾಜ್ ರವರಿಗೆ ನೀವೇನು ನೇತಾ ಇಲ್ಲ ನಮ್ಮನ್ನು ಕೇಳೋದಕ್ಕೆ ನೀವ್ಯಾರು ಎಂದು ಪ್ರಶ್ನೆ ಮಾಡಿದ್ದಾರೆ. ವಿಶ್ವಜ್ಞಾನಿ ಭೋಧೊಸತ್ವ ಡಾ.ಬಿ.ಆರ್.ಅಂಬೇಡ್ಕರ್ ಅವರು ಒಂದೇ ಸಮಾಜಕ್ಕೆ ಸಂವಿಧಾನ ಬರೆದಿರುವ ಹಾಗೆ ಮಾತನಾಡುತ್ತಿದ್ದಾರೆ, ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಯಾಗಿ ಸುಗಂಧಾ ಇವರು ಬಸವೇಶ್ವ ವೃತ್ತದ ಹತ್ತಿರ ನೀರು ನಿಂತ್ರೆ ನಿನಗೇನು ಎಂದು ಪ್ರಶ್ನೆ ಮಾಡಿದ್ದಾರೆ ಎಂದು ಯುರಾಜ್ ತಿಳಿಸಿದ್ದಾರೆ. ಇವರೇ ಜಾತಿ ಮಾಡಿದರೆ ಇನ್ನೂ ಓದು ಬಾರದೆ ಇರುವ ಪ್ರಜೆಗಳು ಹೇಗೆ ಮಾತನಾಡಬೇಕು ಹೇಳಿ ಎಂದರೆ ಪಿಡಿಓ ಸುಗಂಧರವರು ರೆಡಿ ಇದ್ರೆ ಬನ್ನಿ ಎಂದು ನನ್ನನ್ನು ಆವಾಜ್ ಹಾಕಿದ್ದಾರೆ , ಸುಮ್ಮನ್ನೆ ಕುಳಿತ್ತಿನಿ ಅಂತ ಜಾಸ್ತಿ ಮಾಡುತ್ತಿದ್ದಿ ಏನ್ ಮಾಡುವುದು ಇದೆ ಮಾಡಿ ತೋರುಸ್ತಿನಿ ಎಂದು ಬೆದರಿಕೆ ಹಾಕಿದ್ದಾರೆ. ನಿನ್ನ ವಾಡ್ನಲ್ಲಿ ಇರುವ ಅಂಬೇಡ್ಕರ್ ಮೂರ್ತಿ ಮೊದಲು ನೋಡ್ಕೋ ಎಂದು ಸಿಟ್ಟಿನಿಂದ ಹೆಳಿದ್ದಾರೆ ಎಂದು ಯುರಾಜ್ ಮಾತನಾಡಿ ತಿಳಿಸಿದರು. ಒಂದು ವೇಳೆ ನನಗೆ ಏನಾದರೂ ಜೀವಕ್ಕೆ ಅಪಾಯವಾದರೆ ನೇರಹೋಣೆ ಗ್ರಾ.ಪಂ.ಅಭಿವೃದ್ಧಿ ಅಧಿಕಾರಿ ಸುಗಂಧ ಅವರೇ ಕಾರಣವಾಗುತ್ತಾರೆ ಎಂದು ಬರೆದ ಮನವಿ ಪತ್ರದಲ್ಲಿ ತಿಳಿಸಿದ್ದಾರೆ. ಗ್ರಾ.ಪಂ.ಅಭಿವೃದ್ಧಿ ಅಧಿಕಾರಿಯ ಮೇಲೆ ಕಾನೂನು ಕ್ರಮ ಕೈಗೊಳ್ಳದಿದ್ದರೆ ಹುಮನಾಬಾದ ತಾಲ್ಲೂಕಾ ಪಂಚಾಯತ್ ಎದುರುಗಡೆ ಸತ್ಯಾಗ್ರಹ ಮಾಡಲಾಗುತ್ತದೆ ಎಂದು ಸಮಾಜ ಸೇವಕ ಯುರಾಜ್ ಐಹೋಳ್ಳಿ ತಾ.ಪಂ. ಕಾರ್ಯನಿರ್ವ ಹಕಾಧಿಕಾರಿ ದೀಪಿಕಾ ನಾಯ್ಕರವರಿಗೆ ಮನವಿ ಪತ್ರ ನೀಡಿ ಎಚ್ಚರಿಸಿದ್ದಾರೆ. ಈ ಸಂದರ್ಭದಲ್ಲಿ ಆಶ್ರಯ ಟ್ರಸ್ಟ್ (ರಿ) ಉಪಾಧ್ಯಕ್ಷ ಅರವಿಂದ ಜೋಗಿರೆ, ಭೀಮ ಆರ್ಮಿ ಅಧ್ಯಕ್ಷ ಅನೀಲ ದೊಡ್ಡಿ, ಗುರು ಪಾಟೀಲ ಸಿಂಧನಕೇರಾ, ಸಾಮಾಜ ಕಾರ್ಯಕರ್ತ ಮಲ್ಲೇಶ್ ಮಿತ್ರ, ಹುಮನಾಬಾದ ಡಿಎಂಎಸ್‌ಎಸ್ ಉಪಾಧ್ಯಕ್ಷ ಪ್ರವೀಣಕುಮಾರ ಹೊಂಬಾಳೆ, ಭೀಮ ಆರ್ಮಿ ಭಾರತ್ ಏಕ್ತಾ ಮಿಷನ್ ಅಲ್ಪ ಸಂಖ್ಯಾತರ ಅಧ್ಯಕ್ಷ ಎಂ.ಡಿ.ಬಾಬಾ, ಶೇಕ್ ಅಮಾನ್ ಸುಲ್ತಾನಿ ಮೈನೋದ್ದಿನ್ ನಂದಗಾಂವಾಲೆ, ಅಮರ ಸಿಂಧನಕೇರಾ, ಗುಂಡಪ್ಪಾ ಆರ್ಬಳ್ಳಿ, ಸಂದೀಪ ನಿಶಾನ್ದಾರ್ ಹುಮನಾಬಾದ, ಆಕಾಶ್ ಗಂದಿಗೆ ಸಿಂಧನಕೇರಾ ಉಪಸ್ಥಿತರಿದ್ದರು.



